
# 650 ಸಹಾಯಕ ಪ್ರಾಧ್ಯಾಪಕ

4.5 ಲಕ್ಷಕ್ಕೂ ಅಧಿಕ ಸ್ಪರ್ಧಾರ್ಥಿಗಳು Join ಆಗಿರುವ SR WORLD ಟೆಲಿಗ್ರಾಂ ಗ್ರೂಪ್ ಗೆ ನೀವೂ ಸೇರಿ, ಗ್ರೂಪ್ ಲಿಂಕ್: https://t.me/SRWORLDShankarBellubbiSir

# 1,200 ನರ್ಸ್‌ಗಳ ನೇಮಕ

ವೈದ್ಯಕೀಯ ಶಿಕ್ಷಣ ಇಲಾಖೆಯಡಿಯ ವೈದ್ಯಕೀಯ ಕಾಲೇಜುಗಳ ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿನ ಸಹಾಯಕ ಪ್ರಾಧ್ಯಾಪಕರು ಹಾಗೂ ನರ್ಸ್‌ಗಳ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಮುಂದಾಗಿದೆ.



ಗ್ರೂಪ್-ಎ ವೃಂದದ ಹುದ್ದೆಗಳಾದ 650 ಸಹಾಯಕ ಪ್ರಾಧ್ಯಾಪಕರು ಮತ್ತು 1,200 ನರ್ಸ್‌ಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (ಕೆಇಎ) ಮೂಲಕ ನೇಮಕ ಮಾಡಿಕೊಳ್ಳುವಂತೆ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

- » ವೈದ್ಯ, ಕಾಲೇಜು, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿನ ಹುದ್ದೆಗಳ ಭರ್ತಿ
- » ಡಾ.ಶರಣಪ್ರಕಾಶ್ ಪಾಟೀಲ್ ಮಾಹಿತಿ

ಈ ಸಂಬಂಧ ವೈದ್ಯಕೀಯ ಶಿಕ್ಷಣ ಇಲಾಖೆಯ ಅಧಿಕಾರಿಗಳ ಜತೆಗೆ ವಿಕಾಸಸೌಧದಲ್ಲಿ ಬುಧವಾರ ನಡೆದ ಮಹತ್ವದ ಸಭೆಯ ಅಧ್ಯಕ್ಷತೆ ವಹಿಸಿದ್ದರು. ನೇಮಕಾತಿ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಿಕೊಳ್ಳುವ ಉದ್ದೇಶದಿಂದ ಸ್ಪರ್ಧಾತ್ಮಕ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕವೇ ಭರ್ತಿ ಮಾಡಿಕೊಳ್ಳಬೇಕೆಂದು ವೈದ್ಯಕೀಯ ಶಿಕ್ಷಣ ಇಲಾಖೆಗೆ ಸ್ಪಷ್ಟ ನಿರ್ದೇಶನ ನೀಡಿದ್ದಾರೆ.

ನೇಮಕಾತಿ ಸಂದರ್ಭದಲ್ಲಿ ಭ್ರಷ್ಟಾಚಾರ ಮತ್ತು ಸ್ವಜನಪಕ್ಷಪಾತದ ಆರೋಪದ ನಡುವೆ ವೈದ್ಯಕೀಯ ಕಾಲೇಜು, ಸಂಸ್ಥೆಗಳ ಮುಖ್ಯಸ್ಥರು ನಡೆಸುತ್ತಿದ್ದ ಪ್ರಸ್ತುತ ನೇಮಕಾತಿ ಪ್ರಕ್ರಿಯೆಯಿಂದ ತೃಪ್ತರಾಗದ ಸಚಿವರು, ಮುಂಬರುವ ಗ್ರೂಪ್-ಎ ಮತ್ತು ದಾದಿಯರ ನೇಮಕಾತಿಗಳನ್ನು ಕೆಇಎ ಮೂಲಕವೇ ನಡೆಸಬೇಕೆಂದು ಸೂಚನೆ ನೀಡಿದರು.



## ನೇಮಕಾತಿ ಬೈಲಾ ತಿದ್ದುಪಡಿ

ಕೆಇಎ ಮೂಲಕ ನರ್ಸ್‌ಗಳನ್ನು ನೇಮಕ ಮಾಡಿಕೊಳ್ಳುವ ಪ್ರಸ್ತಾವನೆಯನ್ನು ಸರ್ಕಾರ ಎರಡು ವರ್ಷಗಳ ಹಿಂದೆಯೇ ಕಳುಹಿಸಿತ್ತು. ಆದರೆ ಸರಿಯಾದ ಸಿ ಅಂಡ್ ಆರ್ ನಿಯಮಗಳು, (ಕೇಡರ್ ಆ್ಯಂಡ್ ರಿಕ್ರೂಮೆಂಟ್ ರೂಲ್ಸ್) ರೋಸ್ಟರ್ ವ್ಯವಸ್ಥೆ ಇಲ್ಲದಿದ್ದಲ್ಲಿ ಪರೀಕ್ಷೆಯನ್ನು ನಡೆಸುವುದು ಕಷ್ಟ ಎಂದು ಕೆಇಎ ಉತ್ತರಿಸಿದೆ ಎಂಬ ಮಾಹಿತಿಯನ್ನು ಸಭೆಯಲ್ಲಿ ಅಧಿಕಾರಿಗಳು ಸಚಿವರ ಗಮನಕ್ಕೆ ತಂದರು. ಈ ಕಾರಣಕ್ಕಾಗಿ ಇಲಾಖೆಯ ನೇಮಕಾತಿ ಬೈಲಾಗಳನ್ನು ತಿದ್ದುಪಡಿ ಮಾಡಲಾಗುವುದು ಎಂದು ಪಾಟೀಲ್ ಹೇಳಿದರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ ದಾದಿಯರ ನೇಮಕಾತಿಗೆ ಅನ್ವಯವಾಗುವ ಸಿ ಮತ್ತು ಆರ್ ನಿಯಮಗಳನ್ನು ಅನುಸರಿಸುವಂತೆ ಸಚಿವರು ವೈದ್ಯಕೀಯ ಶಿಕ್ಷಣ ಇಲಾಖೆಯ ನಿರ್ದೇಶಕರು ಮತ್ತು ಜಂಟಿ ಕಾರ್ಯದರ್ಶಿಗೆ ಸೂಚಿಸಿದರು.

4.5 ಲಕ್ಷಕ್ಕೂ ಅಧಿಕ ಸ್ಪರ್ಧಾರ್ಥಿಗಳು Join ಆಗಿರುವ SR WORLD ಟೆಲಿಗ್ರಾಂ ಗ್ರೂಪ್ ಗೆ ನೀವೂ ಸೇರಿ, ಗ್ರೂಪ್ ಲಿಂಕ್: https://t.me/SRWORLDShankarBellubbiSir

## ಪಠ್ಯಕ್ರಮಕ್ಕೆ ತಜ್ಞರ ಸಮಿತಿ

ನೇಮಕಾತಿ ನಿಲುವಳಿಯನ್ನು ಕೆಇಎಗೆ ಹಸ್ತಾಂತರಿಸುವ ಸುಗಮ ಪ್ರಕ್ರಿಯೆಗಾಗಿ, ಪರೀಕ್ಷೆಗಳನ್ನು ನಡೆಸಲು ಪಠ್ಯಕ್ರಮಕ್ಕಾಗಿ ತಜ್ಞರ ಸಮಿತಿಯನ್ನು ರಚಿಸುವಂತೆ ವೈದ್ಯಕೀಯ ಶಿಕ್ಷಣ ನಿರ್ದೇಶಕಿ ಡಾ.ಸುಜಾತಾ ರಾಥೋಡ್ ಅವರಿಗೆ ಶರಣಪ್ರಕಾಶ್ ಪಾಟೀಲ್ ಸೂಚಿಸಿದರು.

## 22 ವೈದ್ಯಕೀಯ ಕಾಲೇಜುಗಳು

ರಾಜ್ಯಾದ್ಯಂತ 22 ವೈದ್ಯಕೀಯ ಕಾಲೇಜುಗಳು ಮತ್ತು 11 ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು ವೈದ್ಯಕೀಯ ಶಿಕ್ಷಣ ಇಲಾಖೆ ಅಧೀನದಲ್ಲಿವೆ. ಇಲ್ಲಿನ ಹುದ್ದೆಗಳನ್ನು ನಿಯಮಾನುಸಾರ ನೇಮಕಾತಿ ಮಾಡಿಕೊಳ್ಳಬೇಕಿದೆ ಎಂದು ಸಚಿವರು ತಿಳಿಸಿದ್ದಾರೆ. ನೇಮಕಾತಿ ಪ್ರಕ್ರಿಯೆಯಲ್ಲಿ ಪಾರದರ್ಶಕತೆಯನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಬೇಕು. ಖಾಲಿ ಇರುವ ಹುದ್ದೆಗಳಿಗೆ ಪರೀಕ್ಷೆಗಳನ್ನು ನಡೆಸಲು ಕೆಇಎಗೆ ಅಗತ್ಯ ಸಹಕಾರ ನೀಡಬೇಕು.


ಶೀಘ್ರದಲ್ಲೇ ವೈದ್ಯಕೀಯ ಕಾಲೇಜುಗಳಿಗೆ 650 ಸಹಾಯಕ ಪ್ರಾಧ್ಯಾಪಕರು, 1,200 ದಾದಿಯರ ನೇಮಕ
4.5 ಲಕ್ಷಕ್ಕೂ ಅಧಿಕ ಸ್ಪರ್ಧಾರ್ಥಿಗಳು Join ಆಗಿರುವ SR WORLD ಟೆಲಿಗ್ರಾಂ ಗ್ರೂಪ್ ಗೆ ನೀವೂ ಸೇರಿ, ಗ್ರೂಪ್ ಲಿಂಕ್: https://t.me/SRWORLDShankarBellubbiSir
"ವೈದ್ಯಕೀಯ ಶಿಕ್ಷಣ ಇಲಾಖೆಯಡಿ ಬರುವ ಗ್ರೂಪ್-ಎ ನ 650 ಸಹಾಯಕ ಪ್ರಾಧ್ಯಾಪಕರು ಮತ್ತು 1,200 ದಾದಿಯರ ಹುದ್ದೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ನೇಮಕ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ."
Medical Colleges

**DIPR Karnataka**
@KarnatakaVarthe

ವೈದ್ಯಕೀಯ ಶಿಕ್ಷಣ ಇಲಾಖೆಯಡಿ ಬರುವ ಗ್ರೂಪ್ -ಎ ನ 650 ಸಹಾಯಕ ಪ್ರಾಧ್ಯಾಪಕರು ಮತ್ತು 1200 ನರ್ಸ್ ಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ನೇಮಕ ಮಾಡಿಕೊಳ್ಳುವಂತೆ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

4.5 ಲಕ್ಷಕ್ಕೂ ಅಧಿಕ ಸ್ಪರ್ಧಾರ್ಥಿಗಳು Join ಆಗಿರುವ SR WORLD ಟೆಲಿಗ್ರಾಂ ಗ್ರೂಪ್ ಗೆ ನೀವೂ ಸೇರಿ, ಗ್ರೂಪ್ ಲಿಂಕ್: https://t.me/SRWORLDShankarBellubbiSir

ನೇಮಕಾತಿ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಿಕೊಳ್ಳುವ ಉದ್ದೇಶದಿಂದ ನೇಮಕವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕವೇ ನೇಮಕ ಭರ್ತಿ ಪ್ರಕ್ರಿಯೆ ಮಾಡಬೇಕೆಂದು ಇಲಾಖೆಗೆ ಸ್ಪಷ್ಟ ನಿರ್ದೇಶನ ನೀಡಿದ್ದಾರೆ. ರಾಜ್ಯದಲ್ಲಿ 22 ವೈದ್ಯಕೀಯ ಕಾಲೇಜುಗಳಿದ್ದು, 11 ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಸಹ ನಿಯಮದಂತೆ ಹುದ್ದೆಗಳ ನೇಮಕವಾಗಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

#medicalcollege

@CMofKarnataka

DIPR Karnataka @Karnataka... · 12h

ವೈದ್ಯಕೀಯ ಶಿಕ್ಷಣ ಇಲಾಖೆಯಡಿ ಬರುವ ಗ್ರೂಪ್ -ಎ ನ 650 ಸಹಾಯಕ ಪ್ರಾಧ್ಯಾಪಕರು ಮತ್ತು 1200 ನರ್ಸ್ ಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ನೇಮಕ ಮಾಡಿಕೊಳ್ಳುವಂತೆ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ನೇಮಕಾತಿ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಿಕೊಳ್ಳುವ ಉದ್ದೇಶದಿಂದ ನೇಮಕವನ್ನು

Show more




6 40 979

ವಿಜಯವಾಣಿ

ನಂ.1

ಕನ್ನಡ ದಿನಪತ್ರಿಕೆ

# 1850 ಹುದ್ದೆ ನೇಮಕ ಪರ್ವ

**ಬೆಂಗಳೂರು:** ಬೃಹತ್ ನೇಮಕಾತಿ ಪರ್ವಕ್ಕೆ ರಾಜ್ಯ ಸಜ್ಜಾಗಿದೆ. ವೈದ್ಯಕೀಯ ಶಿಕ್ಷಣ ಇಲಾಖೆ ವ್ಯಾಪ್ತಿಯ ಕಾಲೇಜು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಿಗೆ ಅಗತ್ಯ ಇರುವ ಸಹಾಯಕ ಪ್ರಾಧ್ಯಾಪಕರು ಹಾಗೂ ದಾದಿಯರ ನೇಮಕಕ್ಕೆ ಸರ್ಕಾರ ಮುಂದಾಗಿದೆ. ಗ್ರೂಪ್-ಎನ 650 ಸಹಾಯಕ ಪ್ರಾಧ್ಯಾಪಕರು ಮತ್ತು 1200 ನರ್ಸ್‌ಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ನೇಮಕ ಮಾಡಿಕೊಳ್ಳುವಂತೆ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಇದೇ ವಿಚಾರವಾಗಿ ಅವರು ಬುಧವಾರ ವೈದ್ಯಕೀಯ ಶಿಕ್ಷಣ ಇಲಾಖೆ ಅಧಿಕಾರಿಗಳ ಜತೆ ಸಭೆ ನಡೆಸಿದರು.

» **ಸಹಾಯಕ ಪ್ರಾಧ್ಯಾಪಕರು, ದಾದಿಯರ ಹುದ್ದೆ ಭರ್ತಿ**

ವಿವರ **ಪುಟ 7**

Bengaluru Edition
Aug 8, 2024 Page No. 3
Powered by: erelego.com

## 650 ಸಹಾಯಕ ಪ್ರಾಧ್ಯಾಪಕರು, 1200 ದಾದಿಯರ ಶೀಘ್ರ ನೇಮಕ | ಶರಣಪ್ರಕಾಶ್ ಪಾಟೀಲ್ ಸಭೆ

# ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ನೇಮಕಾತಿ ಪರ್ವ

■ **ವಿಜಯವಾಣಿ ಸುದ್ದಿಜಾಲ** ಬೆಂಗಳೂರು

ವೈದ್ಯಕೀಯ ಶಿಕ್ಷಣ ಇಲಾಖೆ ವ್ಯಾಪ್ತಿಯ ಕಾಲೇಜು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಿಗೆ ಅಗತ್ಯ ಇರುವ ಸಹಾಯಕ ಪ್ರಾಧ್ಯಾಪಕರು ಹಾಗೂ ದಾದಿಯರ ನೇಮಕಕ್ಕೆ ಸರ್ಕಾರ ಮುಂದಾಗಿದೆ. ಗ್ರೂಪ್-ಎ ನ 650 ಸಹಾಯಕ



ಪ್ರಾಧ್ಯಾಪಕರು ಮತ್ತು 1200 ನರ್ಸ್‌ಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ನೇಮಕ ಮಾಡಿಕೊಳ್ಳುವಂತೆ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಈ ಸಂಬಂಧ ವೈದ್ಯಕೀಯ ಶಿಕ್ಷಣ ಇಲಾಖೆ ಅಧಿಕಾರಿಗಳ ಜತೆ ವಿಕಾಸಸೌಧದಲ್ಲಿ ಬುಧವಾರ ನಡೆದ ಮಹತ್ವದ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ನೇಮಕಾತಿ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಿಕೊಳ್ಳುವ ಉದ್ದೇಶದಿಂದ ಸ್ಪರ್ಧಾತ್ಮಕ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕವೇ ನಡೆಸಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಬೇಕೆಂದು ಇಲಾಖೆಗೆ ಸ್ಪಷ್ಟ ನಿರ್ದೇಶನ ನೀಡಿದರು.

ಸಹಾಯಕ ಪ್ರಾಧ್ಯಾಪಕರು ಹಾಗೂ ನರ್ಸ್‌ಗಳ ನೇಮಕಾತಿ ಸಂದರ್ಭದಲ್ಲಿ ಭ್ರಷ್ಟಾಚಾರ ಮತ್ತು ಸ್ವಜನಪಕ್ಷಪಾತದ ಆರೋಪದ ನಡುವೆ ವೈದ್ಯಕೀಯ ಕಾಲೇಜು ಸಂಸ್ಥೆಗಳ ಮುಖ್ಯಸ್ಥರು ನೇಮಕಾತಿ ನಡೆಸುತ್ತಿದ್ದ ಪ್ರಸ್ತುತ ನೇಮಕಾತಿ ಪ್ರಕ್ರಿಯೆಯಿಂದ ತೃಪ್ತರಾಗದ ಸಚಿವರು, ಮುಂಬರುವ ಗ್ರೂಪ್-ಎ ಮತ್ತು ದಾದಿಯರ ನೇಮಕಾತಿಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕವೇ ಭರ್ತಿ ಮಾಡಿಕೊಳ್ಳಬೇಕೆಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ರಾಜ್ಯಾದ್ಯಂತ 22 ವೈದ್ಯಕೀಯ ಮತ್ತು 11 ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು ಸೇರಿ ವೈದ್ಯಕೀಯ ಶಿಕ್ಷಣ ಇಲಾಖೆ ಅಡಿಯಲ್ಲಿ ಬರುತ್ತಿವೆ. ಈ ಹುದ್ದೆಗಳನ್ನು ನಿಯಮದಂತೆ ಭರ್ತಿ ಮಾಡಬೇಕೆಂದು ಸಚಿವರು ತಾಕೀತು ಮಾಡಿದರು.



ನೇಮಕಾತಿ ಪ್ರಕ್ರಿಯೆಯಲ್ಲಿ ಕಟ್ಟುನಿಟ್ಟಾಗಿ ಪಾರದರ್ಶಕತೆ ಪಾಲನೆ ಮಾಡಬೇಕು. ಖಾಲಿ ಇರುವ ಹುದ್ದೆಗಳಿಗೆ ಪರೀಕ್ಷೆಗಳನ್ನು ನಡೆಸಲು ಕೆಇಎಗೆ ಅಗತ್ಯವಾದ ಸಹಕಾರ ನೀಡಬೇಕು. ಜೊತೆಗೆ ಇಲಾಖೆಯ ನೇಮಕಾತಿ ಬೈಲಾಗಳನ್ನು ತಿದ್ದುಪಡಿ ಮಾಡಲಾಗುವುದು ಎಂದು ಪಾಟೀಲ್ ಹೇಳಿದರು.

ಕೆಇಎ ಮೂಲಕ ಶುಶ್ರೂಷಕರನ್ನು ನೇಮಕ ಮಾಡಿಕೊಳ್ಳುವ ಪ್ರಸ್ತಾವನೆಯನ್ನು ಸರ್ಕಾರ ಎರಡು ವರ್ಷಗಳ ಹಿಂದೆಯೇ ಕಳುಹಿಸಿತ್ತು. ಆದಾಗ್ಯೂ, ಸರಿಯಾದ ಸಿ ಆ್ಯಂಡ್ ಆರ್ ನಿಯಮಗಳು, ರೋಸ್ಟರ್ ಸಿಸ್ಟಮ್ ಇಲ್ಲದಿದ್ದಲ್ಲಿ ಪರೀಕ್ಷೆ ನಡೆಸುವುದು ಕಷ್ಟ ಎಂದು ಕೆಇಎ ಉತ್ತರಿಸಿದೆ ಎಂಬ ಮಾಹಿತಿಯನ್ನು ಸಭೆಯಲ್ಲಿ ಅಧಿಕಾರಿಗಳು ಸಚಿವರ ಗಮನಕ್ಕೆ ತಂದರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ ದಾದಿಯರ ನೇಮಕಾತಿಗೆ ಅನ್ವಯವಾಗುವ ಸಿ ಮತ್ತು ಆರ್ ನಿಯಮಗಳನ್ನೇ ವೈದ್ಯಕೀಯ ಶಿಕ್ಷಣ ಇಲಾಖೆಗೂ ಅನುಸರಿಸುವಂತೆ ಸಚಿವರು ವೈದ್ಯಕೀಯ ಶಿಕ್ಷಣ ಇಲಾಖೆ ನಿರ್ದೇಶಕರು ಮತ್ತು ಜಂಟಿ ಕಾರ್ಯದರ್ಶಿಗೆ ಸೂಚಿಸಿದರು.

ನೇಮಕಾತಿ ನಿಲುವಳಿಯನ್ನು ಕೆಇಎಗೆ ಹಸ್ತಾಂತರಿಸುವ ಸುಗಮ ಪ್ರಕ್ರಿಯೆಗಾಗಿ, ಪರೀಕ್ಷೆಗಳನ್ನು ನಡೆಸಲು ಕೆಇಎಗೆ ಪಠ್ಯಕ್ರಮಕ್ಕಾಗಿ ತಜ್ಞರ ಸಮಿತಿ ರಚಿಸುವಂತೆ ಸಚಿವರು ವೈದ್ಯಕೀಯ ಶಿಕ್ಷಣ ನಿರ್ದೇಶಕಿ ಡಾ.ಸುಜಾತಾ ರಾಥೋಡ್ ಅವರಿಗೆ ಸೂಚಿಸಿದರು.

## ಅರ್ಜಿ ಸಲ್ಲಿಸಲು ಮತ್ತೆ ಅವಕಾಶ

**ಬೆಂಗಳೂರು:** ವೈದ್ಯಕೀಯ, ದಂತ ವೈದ್ಯಕೀಯ ಮತ್ತು ಆಯುಷ್ ಕೋರ್ಸ್‌ಗಳ ಪ್ರವೇಶಕ್ಕೆ ಇದುವರೆಗೂ ಅರ್ಜಿ ಸಲ್ಲಿಸದ, ಯುಜಿನೀಟ್-24ರಲ್ಲಿ ಅರ್ಹತೆ ಪಡೆದವರಿಗೆ ಹೊಸದಾಗಿ ಅರ್ಜಿ ಸಲ್ಲಿಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಲಿಂಕ್ ಬಿಡುಗಡೆ ಮಾಡಿದೆ. ರಾಜ್ಯ ಮತ್ತು ಹೊರ ರಾಜ್ಯದ ಅರ್ಹ ಅಭ್ಯರ್ಥಿಗಳು ಮಾತ್ರ ಆ.9ರೊಳಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಆನಂತರ ಬರುವ ಅರ್ಜಿಗಳಿಗೆ ಅವಕಾಶ ಇರುವುದಿಲ್ಲ ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ತಿಳಿಸಿದ್ದಾರೆ. ಕೆಇಎ ವೆಬ್ ಪೋರ್ಟಲ್‌ನಲ್ಲಿ, ಯುಜಿನೀಟ್-24ಕ್ಕೆ ಹೊಸದಾಗಿ ನೋಂದಣಿ ಮಾಡುವ ಲಿಂಕ್ ಆಯ್ಕೆ ಮಾಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ನಿಗದಿತ ಶುಲ್ಕ ಪಾವತಿಸಬೇಕು ಎಂದು ತಿಳಿಸಿದ್ದಾರೆ.

**ಕೆಇಎ ಮೂಲಕವೇ ಹಂಚಿಕೆ:** ವೈದ್ಯ, ದಂತ ವೈದ್ಯಕೀಯ ಮತ್ತು ಆಯುಷ್ ಕೋರ್ಸ್‌ಗಳ ಪ್ರವೇಶಕ್ಕೆ ಎಲ್ಲ ವಿಧದ ಸೀಟುಗಳನ್ನು ಕೆಇಎ ಮೂಲಕವೇ ಹಂಚಿಕೆ ಮಾಡಲಾಗುತ್ತದೆ. ಕೊನೆಯ ಹಂತದಲ್ಲಿ ಬಾಕಿ ಉಳಿಯುವ ಸೀಟುಗಳನ್ನೂ ಕೆಇಎ ಮೂಲಕವೇ ಮಾಡಲಾಗುತ್ತದೆ. ಈ ಸಂಬಂಧ ರಾಷ್ಟ್ರೀಯ ವೈದ್ಯಕೀಯ ಮಂಡಳಿಯ ಸ್ಪಷ್ಟ ನಿರ್ದೇಶನ ಇದೆ ಎಂದು ತಿಳಿಸಿದ್ದಾರೆ.

ಕನ್ನಡಪ್ರಭ

# 650 ಸಹಾಯಕ ಪ್ರಾಧ್ಯಾಪಕರ ನೇಮಕಾತಿ: ಶರಣ್ ಪ್ರಕಾಶ್

## ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಮೂಲಕ ನೇಮಕ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದ ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ 650 ಸಹಾಯಕ ಪ್ರಾಧ್ಯಾಪಕರು ಮತ್ತು 1200 ಶುಶ್ರೂಷಕರ ನೇಮಕಕ್ಕೆ ನಿರ್ಧರಿಸಿದ್ದು, ಕೂಡಲೇ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಪಾರದರ್ಶಕವಾಗಿ ನೇಮಕಾತಿ ಪ್ರಕ್ರಿಯೆ ನಡೆಸಬೇಕು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣ್ ಪ್ರಕಾಶ್ ಪಾಟೀಲ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.



ವಿಕಾಸಸೌಧದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ನೇಮಕಾತಿ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಿಕೊಳ್ಳುವ ಉದ್ದೇಶದಿಂದ ಸ್ಪರ್ಧಾತ್ಮಕ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕವೇ ನಡೆಸಬೇಕು ಎಂದು ನಿರ್ದೇಶನ ನೀಡಿದರು.

ವೈದ್ಯಕೀಯ ಕಾಲೇಜು ಸಂಸ್ಥೆಗಳ ಮುಖ್ಯಸ್ಥರು ನಡೆಸುತ್ತಿದ್ದ ಪ್ರಸ್ತುತ ನೇಮಕಾತಿ ಪ್ರಕ್ರಿಯೆ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಸಹಾಯಕ ಪ್ರಾಧ್ಯಾಪಕರು ಹಾಗೂ ಶುಶ್ರೂಷಕರ ನೇಮಕಾತಿ ಸಂದರ್ಭದಲ್ಲಿ ಭ್ರಷ್ಟಾಚಾರ ಮತ್ತು ಸ್ವಜನಪಕ್ಷಪಾತದ ಆರೋಪ ಕೇಳಿ ಬರುತ್ತಿದೆ ಎಂದರು.

BENGALURU Edition
Aug 8, 2024 Page No. 06
Powered by: erelego.com

# ವೈದ್ಯ ಕಾಲೇಜು: ಕೆಇಎ ಮೂಲಕ ನೇಮಕ

4.5 ಲಕ್ಷಕ್ಕೂ ಅಧಿಕ ಸ್ಪರ್ಧಾರ್ಥಿಗಳು Join ಆಗಿರುವ SR WORLD ಟೆಲಿಗ್ರಾಂ ಗ್ರೂಪ್ ಗೆ
ನೀವೂ ಸೇರಿ, ಗ್ರೂಪ್ ಲಿಂಕ್: https://t.me/SRWORLDShankarBellubbiSir

ಪ್ರಜಾವಾಣಿ ವಾರ್ತೆ

ಬೆಂಗಳೂರು: ರಾಜ್ಯದ ವೈದ್ಯಕೀಯ ಕಾಲೇಜು ಹಾಗೂ ಆಸ್ಪತ್ರೆಗಳಿಗೆ ಅಗತ್ಯವಿರುವ 650 ಸಹಾಯಕ ಪ್ರಾಧ್ಯಾಪಕರು ಹಾಗೂ 1,200 ಶುಶ್ರೂಷಣಾ ಅಧಿಕಾರಿಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (ಕೆಇಎ) ಮೂಲಕ ನೇಮಕ ಮಾಡಿಕೊಳ್ಳಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ಹೇಳಿದರು.

ವೈದ್ಯಕೀಯ ಶಿಕ್ಷಣ ಇಲಾಖೆಯ ಅಧಿಕಾರಿಗಳ ಜೊತೆ ಬುಧವಾರ ನಡೆದ ಸಭೆಯ ನಂತರ ಅವರು ಮಾತನಾಡಿದರು.

ನೇಮಕಾತಿ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಿಕೊಳ್ಳಲು ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನೇಮಕ ಮಾಡಿಕೊಳ್ಳಲು ನಿರ್ಧರಿಸಲಾಗಿದೆ. ಅದಕ್ಕಾಗಿ ಕೆಇಎಗೆ ಪರೀಕ್ಷೆ ನಡೆಸಲು ಪ್ರಸ್ತಾವ ಕಳುಹಿಸಲಾಗುವುದು ಎಂದರು.

22 ವೈದ್ಯಕೀಯ ಕಾಲೇಜುಗಳು ಮತ್ತು 11 ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಿವೆ. ಹಿಂದೆ ವೈದ್ಯಕೀಯ ಕಾಲೇಜುಗಳ ಮುಖ್ಯಸ್ಥರ ನೇತೃತ್ವದ ಸಮಿತಿಗಳೇ ಸಹಾಯಕ ಪ್ರಾಧ್ಯಾಪಕರು ಹಾಗೂ ಶುಶ್ರೂಷಣಾ ಅಧಿಕಾರಿಗಳನ್ನು ನೇಮಕ ಮಾಡಿಕೊಳ್ಳುತ್ತಿದ್ದವು. ನೇಮಕಾತಿಯಲ್ಲಿ ಭ್ರಷ್ಟಾಚಾರ ಮತ್ತು ಸ್ವಜನಪಕ್ಷಪಾತದ ಆರೋಪಗಳು ಕೇಳಿ ಬಂದಿದ್ದವು. ಹಾಗಾಗಿ, ಬೈಲಾಗೆ ತಿದ್ದುಪಡಿ ಮಾಡಲಾಗುವುದು. ಆರೋಗ್ಯ ಇಲಾಖೆ ನೇಮಕಾತಿಗೆ ಅನ್ವಯವಾಗುವ ಸಿ ಮತ್ತು ಆರ್ ನಿಯಮಗಳನ್ನು ಅನುಸರಿಸಲಾಗುವುದು. ಪ್ರಾಧಿಕಾರಕ್ಕೆ ಹೊಣೆಗಾರಿಕೆ ನೀಡಲಾಗುವುದು ಎಂದು ಹೇಳಿದರು.

ಪರೀಕ್ಷೆಗಳಿಗೆ ಅಗತ್ಯವಾದ ಪಠ್ಯಕ್ರಮಕ್ಕಾಗಿ ತಜ್ಞರ ಸಮಿತಿ ರಚಿಸುವಂತೆ ವೈದ್ಯಕೀಯ ಶಿಕ್ಷಣ ನಿರ್ದೇಶಕಿ ಡಾ.ಸುಜಾತಾ ರಾಥೋಡ್ ಅವರಿಗೆ ಶರಣಪ್ರಕಾಶ ಪಾಟೀಲ ಸೂಚಿಸಿದರು.